

# ಸ್ಯಾಂಡಲ್‌ವುಡ್‌ನ ಹಿರಿಯ ಚಿತ್ರನಟ ಶಿವರಾಂ ನಿಧನಕ್ಕೆ ಗಣ್ಯರ ಸಂತಾಪ

## ಸಭಾಪತಿ ಬಸವರಾಜ ಹೊರಟ್ಟಿ



ಕನ್ನಡ ಚಿತ್ರರಂಗದ ಹೆಸರಾಂತ ಹಿರಿಯ ಕಲಾವಿದ ಶಿವರಾಂ ಅವರ ನಿಧನಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಶಿವರಾಂ ಅವರ ಅಗಲಿಕೆಯಿಂದ ಕನ್ನಡ ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ. ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ, ಅವರ ಕುಟುಂಬಕ್ಕೆ ನೋವನ್ನು ಭರಿಸುವ ಶಕ್ತಿಯನ್ನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ ಎಂದು ಬಸವರಾಜ ಹೊರಟ್ಟಿ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# ದೆಹಲಿ ವಾರ್ತೆ

19 ವರ್ಷಗಳಿಂದ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

www.dehalivaarthe.com

LHI | EDITOR & PUBLISHER: K.R. RENU | RNI No. DELKAN/2003/10363 | ಪುಟ 8 | ಸಂಪುಟ 19 | ಸಂಚಿಕೆ 154 | ನವದೆಹಲಿ | ಬೆಲೆ ₹ 8 | ಭಾನುವಾರ, ಡಿಸೆಂಬರ್ 5, 2021


14°
24°

ಕ ಸೇರಿ
ಚ್ಚರಿಕೆ

ರ
ಲಿ:

ಲು

ಳಿಸಿ'

ಬಪತಿಗೆ

ಶಲ್ಯ
ಪು.7

# ರಾಷ್ಟ್ರರಾಜಧಾನಿಯಲ್ಲಿ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಶತಮಾನೋತ್ಸವ

## ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಭಾಗಿ




ಸಂಸದ್ ಭವನದ ಆವರಣದಲ್ಲಿರುವ ಸರ್ದಾರ್ ವಲ್ಲಭಭಾಯ್ ಪಟೇಲ್ ಪ್ರತಿಮೆಯ ಎದುರು ಸಭಾಪತಿ ಹೊರಟ್ಟಿ ಮತ್ತು ಸಭಾಧ್ಯಕ್ಷ ಕಾಗೇರಿ.

**ನವದೆಹಲಿ, ಡಿ.4: ಭಾರತದ ಸಂಸತ್ತಿನ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಶತಮಾನೋತ್ಸವದ ಅಂಗವಾಗಿ ನವದೆಹಲಿಯಲ್ಲಿ ಸಂಸತ್ ಭವನದ ಸೆಂಟ್ರಲ್ ಹಾಲ್‌ನಲ್ಲಿಂದು ನಡೆದ ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಪಾಲ್ಗೊಂಡಿದ್ದರು.**

ರಾಷ್ಟ್ರಪತಿ ರಾಮನಾಥ ಕೋವಿಂದ್‌ರವರು ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಶತಮಾನೋತ್ಸವದ ಅಂಗವಾಗಿ ಹೊರತಂದ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ 100 ವರ್ಷಗಳ ಸಾಧನೆ ಪ್ರತಿಬಿಂಬಿಸುವ ಪ್ರದರ್ಶನವನ್ನು ಉದ್ಘಾಟಿಸಿದರು. ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು, ಲೋಕಸಭಾಧ್ಯಕ್ಷ ಓಂ ಬಿರ್ಲಾ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಅಧ್ಯಕ್ಷ ಅಧಿರ್‌ರಂಜನ್ ಚೌಧರಿ, ರಾಜ್ಯಸಭೆಯ ಉಪಸಭಾಪತಿ ಹರಿವಂಶ ನಾರಾಯಣ್‌ಸಿಂಗ್ ಮತ್ತಿತರರು ಪಾಲ್ಗೊಂಡಿದ್ದರು. ಉದ್ಘಾಟನಾ ಸಮಾರಂಭದ ಬಳಿಕ ನಡೆದ ಗೋಷ್ಠಿಯಲ್ಲಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಪ್ರಸಕ್ತ ಕಾರ್ಯ ನಿರ್ವಹಿಸುತ್ತಿರುವ ಕಾರ್ಯನಿರ್ವಹಣೆ, ಸವಾಲುಗಳು, ಮುನ್ನೋಟ ಸೇರಿದಂತೆ ವಿವಿಧ ವಿಷಯಗಳ ಕುರಿತು ತಜ್ಞರು ವಿಷಯ ಮಂಡಿಸಿದರು. ಈ ಸಂದರ್ಭದಲ್ಲಿ ನಡೆದ ಚರ್ಚೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಎರಡು ದಿನಗಳ ಕಾಲ ನಡೆಯುವ ಈ ಕಾರ್ಯಕ್ರಮದಲ್ಲಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಅಭಿವೃದ್ಧಿ ಕುರಿತು ನಾಳೆ ನಡೆಯುತ್ತಿರುವ ವಿಚಾರ ಗೋಷ್ಠಿಯಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಮ್ಮ ವಿಚಾರ ಮಂಡಿಸಲಿದ್ದಾರೆ.



ಭಾರತದ ಸಂಸತ್ತಿನ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ್ದ ವಿವಿಧ ರಾಜ್ಯಗಳ ಸಭಾಪತಿ ಮತ್ತು ಸಭಾಧ್ಯಕ್ಷರು ಭೋಜನಕೂಟದಲ್ಲಿ ಮಾತುಕತೆಯಲ್ಲಿ ತೊಡಗಿದ್ದರು.